# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** M/s Sai Shakti Developers and Builders Pvt Ltd ರವರು ಗದಗ ಜಿಲ್ಲೆಯ ಗದಗ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 06 ಮೆ.ವ್ಯಾ., ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಹಂಚಿಕೆ ಆದೇಶ ನೀಡುವ ಬಗ್ಗೆ.

**ಓದಲಾಗಿದೆ:**
1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: 1442 –S
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ದಿನಾಂಕ: 16.02.2017 ರ ಹಂಚಿಕೆ ಸಮಿತಿ ಸಭೆ ನಡವಳಿಗಳು.
3. ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಲ್ ಇವರ ಪತ್ರ ಸಂಖ್ಯೆ:ಕೆಆರ್‌ಇಡಿ/08/ಎಸ್‌ಎಸ್‌ಡಿ &ಬಿಪಿಎಲ್-6 MW /ಗದಗ/2017/3880, ದಿ:07/06/2017.

* * *

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಏಕ ಕಡತ ಪದ್ಧತಿಯಡಿಯಲ್ಲಿ M/s Sai Shakti Developers and Builders Pvt Ltd ರವರು ಗದಗ ಜಿಲ್ಲೆಯ ಗದಗ ತಾಲ್ಲೂಕಿನ ಬೆಟಗೇರಿ, ಜಾವಲ್‌ಬೆಂಚಿ, ಪಾಪನಾಶಿನಿ, ಸಾಂಬಾಪುರ ಮತ್ತು ಲಕ್ಕುಂಡಿ ಗ್ರಾಮಗಳಲ್ಲಿ 06 ಮೆ.ವ್ಯಾ., ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸ್ಥಾಪಿಸಲು 06 ಮೆ.ವ್ಯಾ ಸಾಮರ್ಥ್ಯಕ್ಕೆ ನಿಗದಿತ ಶುಲ್ಕವನ್ನು ಪಾವತಿಸಿ ಸಲ್ಲಿಸಿದ ಪ್ರಸ್ತಾವನೆಯನ್ನು ಪರಿಶೀಲಿಸಿದ್ದು, ಸದರಿ ಕಂಪನಿಯ ನೆಟ್‌ವರ್ತ್ ದಿನಾಂಕ: 11.11.2016 ರ ಅಂತ್ಯಕ್ಕೆ ರೂ.67.62 ಕೋಟಿಗಳೆಂದು ಚಾರ್ಟೆಡ್ ಅಂಕೌಂಟೆಂಟ್ ದೃಢೀಕರಿಸಿರುತ್ತಾರೆ. ಸದರಿ ಕಂಪನಿಯ Registrar of Companies, Ministry of Corporate Affairs, Government of India, Mumbai ಇವರಲ್ಲಿ 1996 ರಲ್ಲಿ CIN ಸಂಖ್ಯೆ 11-96357 ರಲ್ಲಿ ನೋಂದಣಿಯಾಗಿರುತ್ತದೆ. M/s Sai Shakti Developers and Builders Pvt Ltd ರವರು ಗದಗ ಜಿಲ್ಲೆಯ ಗದಗ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 06 ಮೆ.ವ್ಯಾ., ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸ್ಥಾಪಿಸಲು ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಇನ್ನಿತರೆ ವಿವರಗಳೊಂದಿಗೆ ಈ ಕೆಳಕಂಡ ಶೆಡ್ಯೂಲ್‌ನಲ್ಲಿರುವಂತೆ ಹಂಚಿಕೆ ಮಾಡಲು ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಲ್ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

Geographical area description for 6.0 MW capacity wind power project

| Sl. No | Topo sheet No | Proposed capacity in MW | Near by villages of the proposed area and district | Geographical area description of the project |
|---|---|---|---|---|
| 1 | 48 M /11 | 6.0 MW (4Nos x 1500kw) | Betigere, Javalbenchi, Papanashini, Sambapura, Lakkundi, Gadag Taluk, Gadag district | The proposed area is near Honawad. The area surrounded by Part-A (points, A- B-C-D-A) and Part – B (Point – P-Q-R-S-T-U-V-P) and area is held in the following Geographical co-ordinates as:<br>**PART-A – 3MW**<br>Point A: Lat: 15°27'46.44''- Long: 75°36'43.56''N<br>Point B: Lat: 15°29'50.28'' - Long: 75°36'26.64''N<br>Point C: Lat: 15°29'52.44'' - Long: 75°38'13.56''N<br>Point D: Lat: 15°26'31.2'' - Long: 75°38'24''N |

...2)

| | | | | |
|---|---|---|---|---|
| | | | | **PART-B- 3MW**<br>Point P: Lat: 15°21'12.96''- Long: 75°40'26.4''N<br>Point Q: Lat: 15°22'32.88''- Long: 75°41'8.52''N<br>Point R: Lat: 15°23'50.28''- Long: 75°40'55.2''N<br>Point S: Lat: 15°23'53.88''- Long: 75°42'56.88''N<br>Point T: Lat: 15°22'36.12''- Long: 75°42'57.24''N<br>Point U: Lat: 15°22'27.84''- Long: 75°42'3.96''N<br>Point V: Lat: 15°21'14.76''- Long: 75°42'5.76''N<br>Peaks: 679, 675, 670, 658, 682, 641, 634, 645 & 657 m AMSL |
| | **Total** | **6.0MW** | | |

ಮೇಲೆ ಓದಲಾದ ಕ್ರಮ ಸಂಖ್ಯೆ: (2) ದಿನಾಂಕ: 16.02.2017 ರಂದು ನಡೆದ ಹಂಚಿಕೆ ಸಮಿತಿ ಸಭೆಯಲ್ಲಿ M/s Sai Shakti Developers and Builders Pvt Ltd ರವರು ಗದಗ ಜಿಲ್ಲೆಯ ಗದಗ ತಾಲ್ಲೂಕಿನ ಬೆಟಗೇರಿ, ಜಾವಲ್‌ಬೆಂಚಿ, ಪಾಪನಾಶಿನಿ, ಸಾಂಬಾಪುರ ಮತ್ತು ಲಕ್ಕುಂಡಿ ಗ್ರಾಮಗಳಲ್ಲಿ 06 ಮೆ.ವ್ಯಾ., ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸುವ ಪ್ರಸ್ತಾವನೆಗೆ ಸಮಿತಿಯು ಸದರಿ ಕಂಪನಿಯು ಸ್ಥಾಪಿಸಲು ಉದ್ದೇಶಿಸಿರುವ ಸ್ಥಳವು ಖಾಸಗಿ ಜಮೀನಾಗಿದ್ದು, ಎರಡು ವರ್ಷದಲ್ಲಿ ವಾಸ್ತವಿಕ ಸಾಮರ್ಥ್ಯಕ್ಕೆ ವಿಸ್ತೃತ ಯೋಜನಾ ವರದಿ ತಯಾರಿಸಿ ಕ್ರೆಡಲ್‌ಗೆ ಸಲ್ಲಿಸಬೇಕೆಂಬ ಷರತ್ತಿಗೊಳಪಟ್ಟು ತತ್ವಶಃ ಅನುಮೋದನೆ ನೀಡಲು ಶಿಫಾರಸ್ಸು ಮಾಡಿರುತ್ತದೆ.

ಮೇಲೆ ಓದಲಾದ ಕ್ರಸಂ(3)ರ ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಲ್ ಇವರ ಪತ್ರದಲ್ಲಿ M/s Sai Shakti Developers and Builders Pvt Ltd ಕಂಪನಿಯವರು ದಿನಾಂಕ: 27.04.2017 ರಲ್ಲಿ 06 ಮೆ.ವ್ಯಾ ಸಾಮರ್ಥ್ಯಕ್ಕೆ ಡಿಪಿಆರ್ ಸಲ್ಲಿಸಿ ಸಂಬಂಧಿಸಿದ ಡಿಪಿಆರ್ ಶುಲ್ಕ ರೂ.6,90,000/-ಗಳನ್ನು ಕ್ರೆಡಲ್‌ಗೆ ಪಾವತಿಸಿರುತ್ತಾರೆ ಎಂದು ತಿಳಿಸುತ್ತಾ, M/s Sai Shakti Developers and Builders Pvt Ltd ಕಂಪನಿಯವರ ಕೋರಿಕೆಯಂತೆ ಈಗಾಗಲೇ ತತ್ವಶಃ ಅನುಮೋದನೆ ನೀಡಲು ಅನುಮೋದನೆಗೊಂಡಿರುವ 06 ಮೆ.ವ್ಯಾ ಸಾಮರ್ಥ್ಯಕ್ಕೆ ಹಂಚಿಕೆ ಆದೇಶವನ್ನು ನೀಡಬಹುದೆಂದು ಅಭಿಪ್ರಾಯಿಸಿರುತ್ತಾರೆ.

ಆದ್ದರಿಂದ ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 80 ಎನ್‌ಸಿಇ 2017, ಬೆಂಗಳೂರು, ದಿನಾಂಕ: 28.02.2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, M/s Sai Shakti Developers and Builders Pvt Ltd ರವರು ಗದಗ ಜಿಲ್ಲೆಯ ಗದಗ ತಾಲ್ಲೂಕಿನ ಬೆಟಗೇರಿ, ಜಾವಲ್‌ಬೆಂಚಿ, ಪಾಪನಾಶಿನಿ, ಸಾಂಬಾಪುರ ಮತ್ತು ಲಕ್ಕುಂಡಿ ಗ್ರಾಮಗಳಲ್ಲಿ 06 ಮೆ.ವ್ಯಾ., ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿದೆ.

Geographical area description for 6.0 MW capacity wind power project

| Sl. No | Toposhe et No | Proposed capacity in MW | Near by villages of the proposed area and district | Geographical area description of the project |
|---|---|---|---|---|
| 1 | 48 M /11 | 6.0 MW (4Nos x 1500kw) | Betigere, Javalbenchi, Papanashini, Sambapura, Lakkundi, Gadag Taluk, Gadag district | The proposed area is near Honawad. The area surrounded by Part-A (points, A- B-C-D-A) and Part –B (Point – P-Q-R-S-T-U-V-P) and area is held in the following Geographical co-ordinates as:<br>**PART-A – 3MW**<br>Point A: Lat: 15°27'46.44''- Long: 75°36'43.56''N<br>Point B: Lat: 15°29'50.28'' - Long: 75°36'26.64''N<br>Point C: Lat: 15°29'52.44'' - Long: 75°38'13.56''N<br>Point D: Lat: 15°26'31.2'' - Long: 75°38'24''N |

...3)

| | | | | |
|---|---|---|---|---|
| | | | | **PART-B- 3MW**<br>Point P: Lat: 15°21'12.96''- Long: 75°40'26.4''N<br>Point Q: Lat: 15°22'32.88''- Long: 75°41'8.52''N<br>Point R: Lat: 15°23'50.28''- Long: 75°40'55.2''N<br>Point S: Lat: 15°23'53.88''- Long: 75°42'56.88''N<br>Point T: Lat: 15°22'36.12''- Long: 75°42'57.24''N<br>Point U: Lat: 15°22'27.84''- Long: 75°42'3.96''N<br>Point V: Lat: 15°21'14.76''- Long: 75°42'5.76''N<br>Peaks: 679, 675, 670, 658, 682, 641, 634, 645 & 657 m AMSL |
| | **Total** | **6.0MW** | | |

**ಷರತ್ತುಗಳು:-**

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರದ ಆದೇಶ ಸಂಖ್ಯೆ : ಇಎನ್ 435 ಎನ್‌ಸಿಇ 2011, ದಿನಾಂಕ :06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011, ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
4. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಅನುಷ್ಠಾನಗೊಳಿಸುತ್ತಿದ್ದು, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.
6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಕೆ.ಪಿ.ಟಿ.ಸಿ.ಎಲ್ ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು ಹಾಗೂ ಸ್ವಂತ ಬಳಕೆ ಮಾಡಿಕೊಳ್ಳಲು / ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಲಾಗಿದೆ.
7. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.
8. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.
9. ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರೆ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಸಂದಾಯ ಮಾಡತಕ್ಕದ್ದು.
10. ಕರ್ನಾಟಕ ಭೂಸುಧಾರಣ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.
11. ಈ ಯೋಜನೆಗೆ ಸರ್ಕಾರದ ಕೈಗಾರಿಕ ನೀತಿ 2014-19 ರನ್ವಯ ಅನ್ವಯಿಸುವ ಸವಲತ್ತುಗಳು ಲಭ್ಯವಾಗುತ್ತವೆ.

...4)

ಸದರಿ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

**ಇವರಿಗೆ:**

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

**ಪ್ರತಿ:**

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
2 ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
4 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ,ಬೆಂಗಳೂರು-9.
5 ವ್ಯವಸ್ಥಾಪಕ ನಿರ್ದೇಶಕರು, ಹೆಸ್ಕಾಂ/ಬೆಸ್ಕಾಂ/ಸೆಸ್ಕಾಂ/ಜೆಸ್ಕಾಂ/ಮೆಸ್ಕಾಂ.
6 ಜಿಲ್ಲಾಧಿಕಾರಿಗಳು, ಗದಗ ಜಿಲ್ಲೆ.
7 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು-1.
8 ಉಪ ಅರಣ್ಯ ಸಂರಕ್ಷಣಾಧಿಕಾರಿ, ಗದಗ / ಗದಗ ವಿಭಾಗ.
9 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
10 M/s Sai Shakti Developers and Builders Pvt Ltd, Hotel Solitaire, New Sanjay Nagar, Parsiwada, Sahar Road, Chakala, Andheri(E), Mumbai- 400 099.
11 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
13 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.